ಇ) ಶಂಕರನಾರಾಯಣದಲ್ಲಿ ಪ್ರಥಮ ದರ್ಜೆ ಕಾಲೇಜಿರುವುದರಿಂದ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿನಿನಿಲಯದ ಅವಶ್ಯಕತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಕೆ.ಎಂ.ಕೃಷ್ಣರೆಡ್ಡಿ (ಸಮಾಜ ಕಲ್ಯಾಣ ಸಚಿವರು):-

ಅ) ಇಲ್ಲ.

ಆ) ಇಲ್ಲ.

ಇ) ಮನವಿಗಳು ಬಂದಿರುತ್ತದೆ.

ವಿಷಯ:- ಸಣ್ಣ ಕೈಗಾರಿಕೆಗಳ ಬೆಳವಣಿಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 189 (414)

ಶ್ರೀ ಕೆ.ಪ್ರತಾಪಚಂದ್ರಶೆಟ್ಟಿ (ಕುಂದಾಪುರ):- ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಉಡುಪಿ ಮತ್ತು ಕುಂದಾಪುರ ತಾಲ್ಲೂಕುಗಳಲ್ಲಿ ಸಣ್ಣ ಕೈಗಾರಿಕೆಗಳು ಬೆಳೆಯದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಸಣ್ಣ ಕೈಗಾರಿಕೆಗಳು ಬೆಳೆಯಲು ಪ್ರೋತ್ಸಾಪ ಕೊಡಲು ಯಾವುದಾದರೂ ಯೋಜನೆ ಸರಕಾರದವರ ಮುಂದಿದೆಯೇ?

ಶ್ರೀ ಬಿ.ಎ.ಮೊಯ್ದೀನ್ (ಸಣ್ಣ ಕೈಗಾರಿಕಾ ಸಚಿವರು):-

ಅ) ಇಲ್ಲ.

ಆ) ರಾಜ್ಯ ಸರ್ಕಾರದ ಕೈಗಾರಿಕಾ ನೀತಿಯನ್ವಯ ಸಹಾಯ ಮತ್ತು ಪ್ರೋತ್ಸಾಹ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಸಣ್ಣ ಕೈಗಾರಿಕೆಗಳ ಬೆಳವಣಿಗೆಗೆ ಉಡುಪಿ ತಾಲ್ಲೂಕಿನ ಬ್ರಹ್ಮಾವರ, ಹಾಲಾಡಿಯಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗುತ್ತಿದೆ.

ವಿಷಯ:- ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗದಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 190 (510)

ಶ್ರೀ ಕೆ.ಎಸ್.ಪುಟ್ಟಣ್ಣಯ್ಯ (ಪಾಂಡವಪುರ):- ಮಾನ್ಯ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಇಡೀ ರಾಜ್ಯದಲ್ಲಿ ಹೆಚ್ಚು ಉತ್ಪಾದನೆ ಮಾಡುವ ಕಬ್ಬು ಬೆಳೆಗಾರರ ಸಮಿತಿ ಮಾಡಿ ವೈಜ್ಞಾನಿಕ ಬೆಲೆ ನಿಗದಿ ಮಾಡುವುದರ ಬಗ್ಗೆ ಸರ್ಕಾರದ ಆಲೋಚನೆ ಇದೆಯೇ?